RNU AIR DHARWAD

# DECEMBER 15, 2025
# AKASHAVANI - DHARWAD
# PRADESH SAMACHARA (KANNADA) 12.00 P.M.

**ಚಿಕ್ಕಮಗಳೂರು ನಗರದಿಂದ** ಶೃಂಗೇರಿ ಸಂಪರ್ಕಿಸುವ ಆಲ್ದೂರು ಬಾಳೆಹೊನ್ನೂರು ರಸ್ತೆಯನ್ನು ಮೇಲ್ದರ್ಜೆಗೇರಿಸಿ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರಿವರ್ತಿಸುವಂತೆ ಕೇಂದ್ರ ಭೂ ಸಾರಿಗೆ ಖಾತೆ ಸಚಿವ ನಿತಿನ ಗಡ್ಕರಿ ಅವರಿಗೆ ಮನವಿ ಸಲ್ಲಿಸಿದ್ದಾಗಿ ಉಡುಪಿ, ಚಿಕ್ಕಮಗಳೂರು ಸಂಸದ, ಕೋಟಾ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ.ನಿತ್ಯ ಶೃಂಗೇರಿ, ಹೊರನಾಡು, ಕುದುರೆಮುಖ, ಆಗುಂಬೆ ಸೇರಿ, ಅನೇಕ ಕ್ಷೇತ್ರಗಳಿಗೆ ಜನರು ಆಗಮಿಸುತ್ತಾರೆ. ಸದ್ಯ ರಸ್ತೆ ಹಲವೆಡೆ ಹಾಳಾಗಿದೆ. ಸಿ.ಆರ್.ಐ.ಎಫ್ ನಿಧಿಯಿಂದ ರಸ್ತೆ ಅಭಿವೃದ್ಧಿಗೆ, 50 ಕೋಟಿ ರೂಪಾಯಿ ಮಂಜೂರು ಮಾಡಿ ಮೇಲ್ದರ್ಜೆಗೆ ಏರಿಸುವಂತೆ ಕೋರಿದ್ದಾಗಿ ಮಾಹಿತಿ ನೀಡಿದ್ದಾರೆ.

<><><>

**ಮಂಡ್ಯ ಜಿಲ್ಲೆ, ಮಳವಳ್ಳಿಯಲ್ಲಿ,** ಸುತ್ತೂರಿನ ಆದಿ ಜಗದ್ಗುರು ಶ್ರೀ ಶಿವರಾತ್ರಿ ಶಿವಯೋಗಿಗಳ, ಸಾವಿರದ 66ನೇ ಜಯಂತ್ಯುತ್ಸವ, ಇಂದಿನಿಂದ ಆರಂಭವಾಗಲಿದೆ. ನಾಳೆ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಕಾರ್ಯಕ್ರಮದಲ್ಲಿ ಭಾಗವಹಿಸಲಿರುವ ಹಿನ್ನೆಲೆ, ಭದ್ರತಾ ಪಡೆಯ ಹಿರಿಯ ಅಧಿಕಾರಿಗಳು, ಹೊಸ ದಿಲ್ಲಿಯಿಂದ ಆಗಮಿಸಿ, ಮಾರೆಹಳ್ಳಿ ಬಳಿ ನಿರ್ಮಿಸಲಾದ, ಹೆಲಿಪ್ಯಾಡ್ ಮತ್ತು ಅಣಕು ಕಾರ್ಯಾಚರಣೆ ಕೈಗೊಂಡರು. ರಾಷ್ಟ್ರಪತಿಗಳ ಭೇಟಿ ನೀಡುವ ಹಿನ್ನೆಲೆ, ಬಿಗಿ ಪೋಲಿಸ್ ಬಂದೋಬಸ್ತ್ ಕಲ್ಪಿಸಲಾಗಿದೆ. ರಾಷ್ಟ್ರಪತಿಯವರು ಸಂಚರಿಸುವ ಮಾರ್ಗದ ಇಕ್ಕೆಲಗಳಲ್ಲಿ, ಕಟ್ಟೆಚ್ಚರ ವಹಿಸಲಾಗಿದೆ. ಜಿಲ್ಲಾಧಿಕಾರಿ ಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಮಲ್ಲಿಕಾರ್ಜುನ ಬಾಲದಂಡಿ ಮೇಲುಸ್ತುವಾರಿ ವಹಿಸಿದ್ದಾರೆ.

<><><>

**ಬೆಂಗಳೂರಿನಲ್ಲಿ ನಿಧನರಾದ ದಾವಣಗೆ**ರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಹಿರಿಯ ಶಾಸಕ ಡಾ.ಶಾಮನೂರು ಶಿವಶಂಕರಪ್ಪ ಅವರ ಅಂತ್ಯಕ್ರಿಯೆ ದಾವಣಗೆರೆಯಲ್ಲಿಂದು ಸಂಜೆ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಡಾ. ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಇಂದು ಮಧ್ಯಾಹ್ನದವರೆಗೂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಇಡಲಾಗಿದ್ದು, ಸಂಜೆ 4: 30 ರ ಸುಮಾರಿಗೆ ಅಂತ್ಯಕ್ರಿಯೆ ನೆರವೇರಲಿದೆ ಎಂದು ಶಾಮನೂರು ಶಿವಶಂಕರಪ್ಪ ಅವರ ಪುತ್ರ, ತೋಟಗಾರಿಕಾ ಖಾತೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ತಿಳಿಸಿದ್ದಾರೆ.

<><><>

**ಸ್ವಚ್ಛ ಪರಿಸರ** ಹೊಂದಿದ, ದೇಶದ ಅಗ್ರ 10 ನಗರಗಳ ಪಟ್ಟಿ ಬಿಡುಗಡೆಯಾಗಿದೆ. ಸೆಂಟರ್ ಫಾರ್ ಕ್ಲೀನ್ ಏರ್ ಸಂಸ್ಥೆಯ ವರದಿ ಪ್ರಕಾರ, ರಾಜ್ಯದ 6 ಸ್ವಚ್ಛ ನಗರಗಳ ಸ್ಥಾನ ಪಡೆದಿವೆ. ಕೊಪ್ಪಳ ಜಿಲ್ಲೆ ರಾಜ್ಯದಲ್ಲೇ ಪ್ರಥಮ ಸ್ಥಾನದಲ್ಲಿದೆ. ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರ ಮತ್ತು ಅರಣ್ಯ ಇಲಾಖೆಯ ನಗರ ಸಭೆಯ ಅಧಿಕಾರಿಗಳು ಪರಿಸರವನ್ನು ಸ್ವಚ್ಛವಾಗಿಡಲು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ ಗುಪ್ತ ಹೇಳಿದ್ದಾರೆ.

**ಧ್ವನಿ–ಶ್ರೀನಿವಾಸ ಗುಪ್ತ ಕೊಪ್ಪಳ ( 34 ಸೆಕೆಂದುಗಳು)**

<><><>

**ಗದಗ ಜಿಲ್ಲೆಯ ನಾಗಾವಿ ಗ್ರಾಮದ**ಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ 18ನೇ ರಾಷ್ಟ್ರೀಯ ಪಂಚಾಯತ್ ಪರಿಷತ್ ಸಮ್ಮೇಳನ ಸಂಪನ್ನಗೊಂಡಿತು. ವಿವಿಧ ಭಾಗಗಳಿಂದ ಆಗಮಿಸಿದ್ದ ಪಂಚಾಯತ್ ರಾಜ್ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಅಭಿವೃದ್ಧಿ ತಜ್ಞರು ವಿಕೇಂದ್ರೀಕರಣ ಮತ್ತು ತಳಮಟ್ಟದ ಪ್ರಜಾಪ್ರಭುತ್ವದ ಭವಿಷ್ಯದ ದಿಕ್ಕುಗಳ ಕುರಿತು ತಮ್ಮ ಚಿಂತನೆಗಳನ್ನು ಹಂಚಿಕೊಂಡರು. ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷರಾದ ಡಾಕ್ಟರ್ ಒಡೆ

ಕೃಷ್ಣ ಮಾತನಾಡಿ, ವಿಕೇಂದ್ರೀಕರಣವು ಪ್ರಜಾಪ್ರಭುತ್ವವನ್ನು ಬಲಪಡಿಸುವುದರೊಂದಿಗೆ ಹೊಣೆಗಾರಿಕೆ ಮತ್ತು ಸಮಾವೇಶಿತ ಅಭಿವೃದ್ಧಿಗೆ ದಾರಿ ಮಾಡಿಕೊಡುತ್ತದೆ. ಅಭಿವೃದ್ಧಿ ಯೋಜನೆಗಳನ್ನು ರೂಪಿಸುವುದು, ಅನುಷ್ಠಾನಗೊಳಿಸುವುದು ಹಾಗೂ ಮೇಲ್ವಿಚಾರಣೆ ಮಾಡುವ ನೈಜ ಅಧಿಕಾರ ತಳಮಟ್ಟದ ಸಂಸ್ಥೆಗಳ ಕೈಯಲ್ಲಿರಬೇಕು ಎಂಬುದು ಪ್ರಜಾಸತ್ತಾತ್ಮಕ ಆಡಳಿತದ ಮೂಲಭೂತ ತತ್ವವಾಗಿದೆ ಎಂದರು. ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಸಚಿವ ಡಾಕ್ಟರ್ ಸುರೇಶ್ ನಾಡಗೌಡರ ಮಾತನಾಡಿ, ತಳಮಟ್ಟದ ಸಂಸ್ಥೆಗಳನ್ನು ಸಬಲಗೊಳಿಸುವುದರಿಂದ ಮಾತ್ರ, ಸಮಾವೇಶಿತ ಹಾಗೂ ಬಲಿಷ್ಠ ಪ್ರಜಾಪ್ರಭುತ್ವ ಸಾಧ್ಯ ಎಂದು ಹೇಳಿದರು.

**<><><>**

**ಚಾಮರಾಜನಗರ ಜಿಲ್ಲೆಯ** ಬುಡಕಟ್ಟು ಸಮುದಾಯದ ಸೂರಿಲ್ಲದ ವನವಾಸಿಗರಿಗೆ ವಸತಿ ಸೌಲಭ್ಯ ಕಲ್ಪಿಸಲು ದಾಖಲೆಗಳ ಸಂಗ್ರಹ ಕಾರ್ಯ ಆರಂಭವಾಗಿದೆ. 'ಮುಖ್ಯಮಂತ್ರಿ ಆದಿವಾಸಿ ಗೃಹ ಭಾಗ್ಯ' ಯೋಜನೆ ಅಡಿ, ರಾಜ್ಯ ಪರಿಶಿ ್ಟ ವರ್ಗಗಳ ಕಲ್ಯಾಣ ಇಲಾಖೆ, ಫಲಾನುಭವಿಗಳನ್ನು ಗುರುತಿಸಲು ಕ್ರಮ ಕೈಗೊಂಡಿದೆ. ಸೋಲಿಗ, ಹಸಲರು, ಗೌಡಲು, ಸಿದ್ದಿ, ಕುಡಿಯ, ಮಲೆ ಕುಡಿಯ, ಕಾಡು ಕುರುಬ, ಇರುಳಿಗ, ಬೆಟ್ಟ ಕುರುಬ, ಯರವ, ಪಣಿಯನ್ ಇತ್ಯಾದಿ ಸಮುದಾಯಗಳ, 6 ಸಾವಿರದ 856 ವಸತಿ ರಹಿತ ಕುಟುಂಬಗಳಿಗೆ, ಸೌಲಭ್ಯ ಒದಗಿಸಲು, ಕಳೆದ ಸೆಪ್ಟೆಂಬರ್‌ನಲ್ಲಿ ಸಚಿವ ಸಂಪುಟ ತೀರ್ಮಾನಿಸಿತ್ತು.

**<><><>**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.**

**<><><>**